**Bangalore**
**Regional Kannada**
**01.04.2024 / 14.30 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

೧. ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿ ಕೇಂದ್ರ ಸ್ಥಾಪನೆಗೆ ಹಾವೇರಿ ಜಿಲ್ಲಾಧಿಕಾರಿ ಸೂಚನೆ.

೨. ತುಮಕೂರಿನ ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮೀಜಿಗಳ ೧೧೭ನೇ ಜಯಂತಿ; ಪ್ರಧಾನಿ ಸೇರಿ ಗಣ್ಯರ ಗೌರವ ನಮನ

೩. ವಿವಿಧ ಜಿಲ್ಲೆಗಳಲ್ಲಿ ಮುಂದುವರೆದ ಮತದಾನ ಜಾಗೃತಿ ಕಾರ್ಯಕ್ರಮ; ಮತದಾನ ಪ್ರಮಾಣ ಹೆಚ್ಚಿಸಲು ಹಲವು ಕ್ರಮ

೪. ತಡೆರಹಿತ ವಿದ್ಯುತ್ ಪೂರೈಕೆಗೆ ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳ ನಿಯೋಜನೆ

**<><*<><>*><>**

ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನ ಜೋಳ ಉತ್ಪನ್ನ ಖರೀದಿ ಕೇಂದ್ರಗಳನ್ನು ಹಾವೇರಿ ಜಿಲ್ಲೆಯ ಆಯ್ದ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣದಲ್ಲಿ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ರಘುನಂದನ ಮೂರ್ತಿ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆ ಹಾಗೂ ಮಾರ್ಗಸೂಚಿ ಅನ್ವಯ ಎಫ್.ಎ.ಕ್ಯೂ ಗುಣಮಟ್ಟದ ಜೋಳ ಖರೀದಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ. ಬಿಳಿಜೋಳ (ಮಾಲ್ದಂಡಿ) ಪ್ರತಿ ಕ್ವಿಂಟಲ್‌ಗೆ ೩ ಸಾವಿರ ೨೨೫ ರೂಪಾಯಿ ಹಾಗೂ ಜೋಳ (ಹೈಬ್ರಿಡ್) ಪ್ರತಿ ಕ್ವಿಂಟಲ್‌ಗೆ ೩ ಸಾವಿರದ ೧೮೦ ರೂಪಾಯಿಂತೆ ಖರೀದಿಸಲು ಸರ್ಕಾರ ಆದೇಶ ಹೊರಡಿಸಿದೆ ಎಂದರು. ಇಂದಿನಿಂದ ಮೇ ೩೧ರವರೆಗೆ ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಂಡಳಿ ನಿಯಮಿತ ಸಂಸ್ಥೆಯ ಮೂಲಕ ಜೋಳ ಖರೀದಿಗೆ ಕ್ರಮವಹಿಸುವಂತೆ ಸೂಚನೆ ನೀಡಲಾಗಿದೆ. ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಜೋಳವನ್ನು ೩೩ ಸಾವಿರ ೭೭೨ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗಿದೆ ಬೆಂಬಲ ಬೆಲೆಯಡಿ ಜೋಳವನ್ನು ಪ್ರತಿ ರೈತರಿಂದ ಜೋಳದ ಉತ್ಪಾದನೆಗೆ ಅನುಗುಣವಾಗಿ ಪ್ರತಿ

ಎಕರೆಗೆ ೨೦ ಕ್ವಿಂಟಲ್‌ನಂತೆ ಖರೀದಿಗೆ ಅವಕಾಶವಿದೆ. ಜೋಳ ಖರೀದಿ ಮೊತ್ತವನ್ನು ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಯಾದ ಬ್ಯಾಂಕ್ ಖಾತೆಗೆ ಹಣ ಜಮೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

**<><*<><>*><>**

ಕರ್ನಾಟಕದ ತುಮಕೂರು ಸಿದ್ಧಗಂಗಾ ಮಠದಲ್ಲಿಂದು ತ್ರಿವಿಧ ದಾಸೋಹಿ ಎಂದೇ ಜನಜನಿತರಾಗಿರುವ ಲಿಂಗೈಕ್ಯ, ಡಾ. ಶಿವಕುಮಾರ ಸ್ವಾಮೀಜಿ ಅವರ ೧೧೭ ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು  ಆಚರಿಸಲಾಗುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ಆಧ್ಯಾತ್ಮಿಕ ನಾಯಕ, ಮತ್ತು ಶಿಕ್ಷಣತಜ್ಞ ಡಾ. ಶ್ರೀ ಶಿವಕುಮಾರ ಸ್ವಾಮಿಗಳ ಜನ್ಮದಿನದಂದು ಅವರಿಗೆ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ನರೇಂದ್ರಮೋದಿ ಅವರು, ಡಾ. ಶಿವಕುಮಾರಸ್ವಾಮಿಗಳು ಸಮಾಜ ಸೇವೆಗೆ ಅಪ್ರತಿಮ ಕೊಡುಗೆಗಳನ್ನು ನೀಡಿದ್ದಾರೆ, ನಿಸ್ವಾರ್ಥತೆ ಮತ್ತು ಸಹಾನುಭೂತಿಯ ನಿಜವಾದ ಮನೋಭಾವವನ್ನು ಸಾಕಾರಗೊಳಿಸಿದ್ದಾರೆ ಎಂದು ಸ್ಮರಿಸಿದ್ದಾರೆ. ಶಿಕ್ಷಣ, ಆರೋಗ್ಯ ಮತ್ತು ಸಮಾಜ ಕಲ್ಯಾಣದಲ್ಲಿ ಸ್ವಾಮಿಗಳು  ಕೈಗೊಂಡಿರುವ ಕಾರ್ಯಗಳು ಲಕ್ಷಾಂತರ ಮಂದಿಯ ಜೀವನಕ್ಕೆ ನೆರವಾಗಿ, ಸಮರ್ಪಣೆ ಮತ್ತು ಮಾನವೀಯ ಸೇವೆಗೆ ಉದಾಹರಣೆಯಾಗಿದೆ ಎಂದು ಪ್ರಧಾನಿ ಶ್ಲಾಘಿಸಿದ್ದಾರೆ. ಸ್ವಾಮೀಜಿಗಳ ಜಯಂತಿ ಅಂಗವಾಗಿ ಹ ಲವು ಗಣ್ಯರು, ಮಠಾಧೀಶರು, ಮಠದ ಹಳೆಯ ವಿದ್ಯಾರ್ಥಿಗಳು, ಶಿವಕುಮಾರ ಸ್ವಾಮಿಗಳ ಸೇವೆ ಸ್ಮರಿಸಿ, ಗೌರವ ನಮನ ಸಲ್ಲಿಸಿದ್ದಾರೆ.

**<><*<><>*><>**

ಉತ್ತಮ ಸರ್ಕಾರ ರಚನೆಯ ಜವಾಬ್ದಾರಿಯನ್ನು ಭಾರತದ ಸಂವಿಧಾನ ಪ್ರತಿಯೊಬ್ಬರಿಗೂ ನೀಡಿದೆ ಎಂದು ದಾವಣಗೆರೆ ಜಿಲ್ಲಾ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಕರಣ್ಣನವರ್ ಹೇಳಿದ್ದಾರೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ದಾವಣಗೆರೆಯಲ್ಲಿಂದು ವಿವಿಧ ಸ್ವ-ಸಹಾಯ ಸಂಘಗಳ ಮಹಿಳೆಯರಿಗೆ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಉತ್ತಮ ಅಭ್ಯರ್ಥಿಯನ್ನು ಆರಿಸಿದರೆ ಸಮುದಾಯದ ಅಭಿವೃದ್ಧಿಗೆ ಶ್ರಮಿಸಿ ಕಾನೂನು ರಚನೆ ಮಾಡುತ್ತಾರೆ. ಹಾಗಾಗಿ ಅಂತಹ ಅಭ್ಯರ್ಥಿಯನ್ನು ಚುನಾವಣೆ ಮೂಲಕ ಗೆಲ್ಲಿಸುವ ಜವಾಬ್ದಾರಿ ನಮ್ಮದಾಗಿದೆ ಎಂದು ಹೇಳಿದರು.

--- ಧ್ವನಿ: ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಕರಣ್ಣನವರ್---

**<><*<><>*><>**

ಲೋಕಸಭಾ ಚುನಾವಣೆಗೆ  ಮೈಸೂರು-ಕೊಡಗು ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಒಡೆಯರ್ ಹಾಗೂ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ.ಮೋಹನ್ ಬೆಂಬಲಿಗರೊಂದಿಗೆ ತೆರಳಿ ಇಂದು ತಮ್ಮ ನಾಮಪತ್ರ ಸಲ್ಲಿಸಿದರು. ತುಮಕೂರು ಕ್ಷೇತ್ರದ ಅಭ್ಯರ್ಥಿ ವಿ.ಸೊಮಣ್ಣ, ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಚಿತ್ರದುರ್ಗ ಎಸ್‌ಟಿ ಮೀಸಲು ಲೋಕಸಭಾ ಕ್ಷೇತ್ರದ ಚುನಾವಣೆಗೆ ಭಾರತೀಯ ಜನತಾ ಪಕ್ಷದಿಂದ ಗೋವಿಂದ ಕಾರಜೋಳ  ನಾಮಪತ್ರ ಸಲ್ಲಿಸಿದರು. ಚಿತ್ರದುರ್ಗ ಜಿಲ್ಲೆಯ ಚುನಾವಣಾ ಅಧಿಕಾರಿ ವೆಂಕಟೇಶ್ ನಾಮಪತ್ರ ಸ್ವೀಕರಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಇದುವರೆಗೆ ಎರಡು ನಾಮಪತ್ರ ಸಲ್ಲಿಕೆಯಾಗಿವೆ.  ಏಪ್ರಿಲ್ ೪ ನಾಮಪತ್ರ ಸಲ್ಲಿಸಲು ಕೊನೆಯದಿನವಾಗಿದೆ.

<><*<><>*><>

ಚಿಕ್ಕಮಗಳೂರು ನಗರದಲ್ಲಿ ಇಂದು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಮತದಾನದ ಜಾಗೃತಿ ಮೂಡಿಸುವ ರಂಗೋಲಿ ಸ್ಪರ್ಧೆ ಆಯೋಜಿಸಲಾಗಿತ್ತು. ಸ್ಪರ್ಧೆಯಲ್ಲಿ ತೃತೀಯ ಲಿಂಗಿಗಳು ಮತ್ತು ಮಹಿಳೆಯರು ಪಾಲ್ಗೊಂಡಿದ್ದರು. ಇನ್ನೊಂದೆಡೆ ತೋಟಗಾರಿಕಾ ಇಲಾಖೆಯ ಸಿಬ್ಬಂದಿ ಮತದಾನ ಅರಿವು ಮೂಡಿಸಲು ಪ್ರಮುಖ ರಸ್ತೆಗಳಲ್ಲಿ ಜಾಥ ನಡೆಸಿದರು.

<><*<><>*><>

ಮಡಿಕೇರಿ- ಕೊಡಗು ಜಿಲ್ಲಾ ಸ್ವೀಪ್ ಸಮಿತಿ ಮತ್ತು ರೋಟರಿ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಮತದಾನ ಜಾಗೃತಿ ಅಭಿಯಾನದ ಪ್ರಯುಕ್ತ ಮಡಿಕೇರಿಯ  ರಾಜಾಸೀಟ್ ಮುಂಭಾಗದಲ್ಲಿ ಮತದಾನ ಜಾಗೃತಿ ಕುರಿತಾದ ಬೀದಿ ನಾಟಕ ಮತ್ತು ಕಾರು ರ್‍ಯಾಲಿ  ಹಮ್ಮಿಕೊಳ್ಳಲಾಗಿತ್ತು. ಕೊಡಗು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಮತ್ತು ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ವರ್ಣಿತ್ ನೇಗಿ ಚಾಲನೆ ನೀಡಿದರು.  ಮತದಾನ ಜಾಗೃತಿ ಕುರಿತಾಗಿ ಸಾರ್ವಜನಿಕರು ಚುನಾವಣಾ ಆಯೋಗದ ಸಹಾಯವಾಣಿ ಸಂಖ್ಯೆ ೧೯೫೦, ಮತ್ತು ಸಿ.ವಿಜಿಲ್ ಆಪ್ ಬಳಕೆ ಕುರಿತಾಗಿ ವರ್ಣಿತ್ ನೇಗಿ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಮೌನೇಶ್ ವಿಶ್ವಕರ್ಮ ತಂಡದವರು ಮತದಾನದ ಮಹತ್ವ ಕುರಿತು ಪ್ರಸ್ತುತಪಡಿಸಿದ ಅರ್ಥಪೂರ್ಣವಾದ ಬೀದಿ ನಾಟಕ ಗಮನ ಸೆಳೆಯಿತು.

<><*<><>*><>

೨೦೨೪ರ ಲೋಕಸಭಾ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿದ್ದು, ರಾಜ್ಯದಲ್ಲಿ ೨ ಹಂತಗಳಲ್ಲಿ ಮತದಾನ ನಡೆಯಲಿದೆ. ಲೋಕಸಭೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ೨೮ ಸಂಸದರು ಕಾರ್ಯ ನಿರ್ವಹಿಸಲಿದ್ದು, ಈ ಪೈಕಿ ೧೪ ದಕ್ಷಿಣ ಲೋಕಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ ೨೬ರಂದು ಮತದಾನ ನಡೆಯಲಿದೆ. ರಾಜ್ಯದ ಉಳಿದ ೧೪ ಉತ್ತರ ಲೋಕಸಭಾ ಕ್ಷೇತ್ರಗಳಲ್ಲಿ ಮೇ ೭ರಂದು ಮತದಾನ ನಡೆಯುವುದು. ಎಲ್ಲ ೨೮ ಲೋಕಸಭಾ ಕ್ಷೇತ್ರಗಳ ಸಮಗ್ರ ಚಿತ್ರಣವನ್ನು ಒದಗಿಸುವ 'ಮತಕ್ಷೇತ್ರ ದರ್ಶನ' ಮಾಹಿತಿಯನ್ನು ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾವರದಿಗಾರರು ಸಿದ್ಧಪಡಿಸಲಿದ್ದಾರೆ. ಈಗ ಬೆಳಗಾವಿ ಲೋಕಸಭಾ ಕ್ಷೇತ್ರದ ವಿವರಗಳು :ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಕೆ.ಎನ್. ದೊಡ್ಡಮನಿ

ಗಡಿ ಭಾಗದ ಬೆಳಗಾವಿ ಜಿಲ್ಲೆಯು ಬೆಳಗಾವಿ ಹಾಗೂ ಚಿಕ್ಕೋಡಿ ಎರಡು ಲೋಕಸಭಾ ಹಾಗೂ ೧೬ ವಿಧಾಸಭಾ ಕ್ಷೇತ್ರಗಳನ್ನು ಹೊಂದಿದ್ದು, ಚುನಾವಣೆಯ ದೃಷ್ಟಿಯಿಂದ ಪ್ರಮುಖ ನಿರ್ಣಾಯಕ ಪಾತ್ರ ವಹಿಸುತ್ತದೆ. ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಅರಭಾವಿ, ಗೋಕಾಕ, ಬೆಳಗಾವಿ ಉತ್ತರ, ಬೆಳಗಾವಿ ದಕ್ಷಿಣ, ಬೆಳಗಾವಿ ಗ್ರಾಮೀಣ, ಬೈಲಹೊಂಗಲ, ಸವದತ್ತಿ- ಯಲ್ಲಮ್ಮ ಹಾಗೂ ರಾಮದುರ್ಗ ಎಂಟು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ.

ಬೆಳಗಾವಿ ಲೋಕಸಭಾಕ್ಷೇತ್ರದಲ್ಲಿ ೧೮ ಲಕ್ಷ ೯೧ ಸಾವಿರದ ೪೦೯ ಮತದಾರರಿದ್ದು, ಈ ಪೈಕಿ ಈ ಕ್ಷೇತ್ರದಲ್ಲಿ ಮಹಿಳಾ ಮತದಾರರ ಸಂಖ್ಯೆ ಅಧಿಕವಾಗಿದ್ದು, ೯ ಲಕ್ಷ ೪೮ ಸಾವಿರದ ೪೭೨ ಮಹಿಳಾ ಮತದಾರರಿದ್ದಾರೆ. ೯ ಲಕ್ಷ ೪೨ ಸಾವಿರದ ೮೫೪ ಪುರುಷ ಮತದಾರರಿದ್ದಾರೆ.೮೩ ಇತರೆ ಮತದಾರರಿದ್ದಾರೆ.

ಹೊಸದಾಗಿ ಮತದಾರರ ನೋಂದಣಿ ಪ್ರಕ್ರಿಯೆ ಮುಂದುವರೆದಿದ್ದು, ಇಲ್ಲಿಯೂ ಮಹಿಳೆಯರ ಸಂಖ್ಯೆ ಪುರುಷರಿಗಿಂತ ಹೆಚ್ಚಿದೆ. ಎಂದು ಚುನಾವಣಾ ಆಯೋಗ ತಿಳಿಸಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದ ಅರಭಾವಿ, ಗೋಕಾಕ, ಬೆಳಗಾವಿ ಉತ್ತರ, ಬೈಲಹೊಂಗಲ ಮತ್ತು ಸವದತ್ತಿ-ಎಲ್ಲಮ್ಮ ಕ್ಷೇತ್ರಗಳಲ್ಲಿ ಮಹಿಳಾ ಮತದಾರರ ಸಂಖ್ಯೆ ಪುರುಷರಿಗಿಂತ ಹೆಚ್ಚಿದೆ. ಉಳಿದಂತೆ, ಬೆಳಗಾವಿ ದಕ್ಷಿಣ, ಬೆಳಗಾವಿ ಗ್ರಾಮೀಣ, ಮತ್ತು ರಾಮದುರ್ಗ ಕ್ಷೇತ್ರಗಳಲ್ಲಿ ಪುರುಷ ಮತದಾರರ ಸಂಖ್ಯೆ ಅಧಿಕವಾಗಿದೆ. ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ಚನ್ನಮ್ಮನ ಕಿತ್ತೂರು ಉತ್ತರಕನ್ನಡ ಲೋಕಸಭಾಕ್ಷೇತ್ರದ ವ್ಯಾಪ್ತಿಗೆ ಒಳಪಟ್ಟಿದ್ದು ಈ ಕ್ಷೇತ್ರದಲ್ಲಿ ೪ ಲಕ್ಷ೧೬ ಸಾವಿರದ ೩೫೩ ಮತದಾರರಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ೪ ಸಾವಿರದ ೫೨೪ ಮತಗಟ್ಟೆಗಳಿವೆ. ಈ ಪೈಕಿ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ೨ ಸಾವಿರದ ೮೬ ಮತಗಟ್ಟೆಗಳಿವೆ. ಚಿಕ್ಕೋಡಿ ಲೋಕಸಭಾಕ್ಷೇತ್ರದಲ್ಲಿ ೧ ಸಾವಿರದ ೮೯೬ ಮತಗಟ್ಟೆಗಳಿವೆ. ಲೋಕಸಭೆಯ ಎರಡನೇ ಹಂತದ ಮತದಾನ ಪ್ರಕ್ರಿಯೆ ಹಿನ್ನಲೆಯಲ್ಲಿ ಬೆಳಗಾವಿ ಲೋಕಸಭೆಗೆ ಮೇ ೭ರಂದು ಮತದಾನ ನಡೆಯಲಿದೆ.

ಇದಕ್ಕಾಗಿ ಜಿಲ್ಲಾ ಆಡಳಿತ ಎಲ್ಲ ಬಗೆಯ ತಯಾರಿಯನ್ನು ಮಾಡಿಕೊಂಡಿದೆ. ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತಗಟ್ಟೆಗಳಿಗೆ ಆಗಮಿಸಿ ಮತ ಚಲಾಯಿಸಲು ಅಗತ್ಯ ಮಾಹಿತಿ ಹಾಗೂ ಜಾಗೃತಿಯುಂಟು ಮಾಡಲಾಗುತ್ತಿದೆ. ಕಳೆದ ೨೦೧೯ರಲ್ಲಿ ನಡೆದ ಚುನಾವಣೆಯಲ್ಲಿ ಶೇಕಡಾ ೬೭.೭೩ ರಷ್ಟು ಮತದಾನ ಆಗಿದ್ದು, ೨೦೨೧ರಲ್ಲಿ ನಡೆದ ಉಪ ಚುನಾವಣೆಯಲ್ಲಿ ಶೇಕಡಾ ೫೬.೦೨ರಷ್ಟು ಮತದಾನ ಆಗಿದೆ. ಲಭ್ಯವಿರುವ ಮತಯಂತ್ರಗಳನ್ನು ಶೇಕಡಾ ೧೩೦ರ ಪ್ರಮಾಣದಲ್ಲಿ ೫ ಸಾವಿರದ ೮೭೪ ಬ್ಯಾಲೆಟ್‌ಯುನಿಟ್ ಹಾಗೂ ವಿವಿ ಪ್ಯಾಡ ಯಂತ್ರಗಳನ್ನು ಹಂಚಿಕೆ ಮಾಡಲಾಗಿದೆ.

ಬೆಳಗಾವಿ ಲೋಕಸಭಾಕ್ಷೇತ್ರ ೧೯೫೭ ರಿಂದ ಈವರೆಗೆ ೧೮ ಚುನಾವಣೆಗಳಿಗೆ ಸಾಕ್ಷಿಯಾಗಿದೆ. ಈ ಪೈಕಿ ೧೯೬೩ ಮತ್ತು ೨೦೨೧ರಲ್ಲಿ ಉಪ ಚುನಾವಣೆ ನಡೆದಿವೆ.

೨೦೦೪ರ ಚುನಾವಣೆಯಲ್ಲಿ ಬಿಜೆಪಿಯಿಂದ ಮೊದಲ ಬಾರಿ ಸಂಸದರಾದ ದಿವಂಗತ ಸುರೇಶ ಅಂಗಡಿ, ೨೦೦೯, ೨೦೧೪ ಮತ್ತು ೨೦೧೯ರ ಚುನಾವಣೆಗಳಲ್ಲಿ ಸತತ ನಾಲ್ಕುಬಾರಿ ಗೆಲುವು ಸಾಧಿಸಿದ್ದರು. ಅವರ ನಿಧನದ ನಂತರ ತೆರವಾದ ಸ್ಥಾನಕ್ಕೆ ೨೦೨೧ರಲ್ಲಿ ನಡೆದ ಉಪ ಚುನಾವಣೆಯಲ್ಲಿ ಅವರ ಪತ್ನಿ ಮಂಗಲಾ ಅಂಗಡಿ ಬಿಜೆಪಿಯಿಂದ ಗೆಲವು ಸಾಧಿಸಿದ್ದರು.

<><*<><>*><>

ನಿರಂತರ ವಿದ್ಯುತ್ ಪೂರೈಸುವ ನಿಟ್ಟಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಮೈಸೂರು ಮತ್ತು ಕಲಬುರಗಿ ಪ್ರದೇಶಗಳ ೪೦೦ ಕಿಲೋ ವ್ಯಾಟ್‌ವರೆಗಿನ ಪ್ರಸರಣ ಮಾರ್ಗಗಳು ಮತ್ತು ಸಬ್‌ಸ್ಟೇಷನ್‌ಗಳ ನಿರ್ವಹಣೆಗಾಗಿ ಎರಡು ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳನ್ನು ನಿಯೋಜಿಸಲಿದೆ. ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳ ಬಳಕೆಯಿಂದ ಗ್ರಾಹಕರಿಗೆ ತಡೆರಹಿತ ವಿದ್ಯುತ್ ಪೂರೈಕೆ ಸಾಧ್ಯವಾಗಲಿದೆ. ಹಾಗಾಗಿ ಈ ತಂತ್ರಜ್ಞಾನದ ಬಳಕೆಗೆ ಒತ್ತು ನೀಡಲಾಗುತ್ತಿದೆ, ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>